**All India Radio: Bangalore**
**National Bulletin In Kannada**
**17.01.2025  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.01.2025  07.35 a.m.**

******************

ಮುಖ್ಯಾಂಶಗಳು

೧. ಸ್ವಾಮಿತ್ವ ಯೋಜನೆ; ನಾಳೆ ವರ್ಚುಯಲ್ ಮೂಲಕ ಪ್ರಧಾನಿಯಿಂದ ೬೫ ಲಕ್ಷಕ್ಕೂ ಹೆಚ್ಚು ಆಸ್ತಿ ಹಕ್ಕು ಪತ್ರಗಳ ವಿತರಣೆ

೨. ಎಲೆಕ್ಟ್ರಾನಿಕ್ಸ್ ಸರಕುಗಳ ರಫ್ತು ಶೇಕಡ ೩೫.೧೧ರಷ್ಟು ಹೆಚ್ಚಳ

೩. ಇದೇ ಭಾನುವಾರ ಆಕಾಶವಾಣಿಯಲ್ಲಿ ಮನ್ ಕಿ ಬಾತ್

೪. ಇಂಡಿಯಾ ಓಪನ್ ಬ್ಯಾಡ್ಮಿಂಟನ್; ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿಂದು ಪಿ.ವಿ.ಸಿಂಧು ಹೋರಾಟ

******************

ಪ್ರಧಾನಿ ನರೇಂದ್ರ ಮೋದಿ ಅವರು ಹತ್ತು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳ ೫೦ ಸಾವಿರಕ್ಕೂ ಹೆಚ್ಚು ಗ್ರಾಮಗಳ ಗ್ರಾಮಸ್ಥರಿಗೆ ಸ್ವಾಮಿತ್ವ ಯೋಜನೆಯಡಿ ೬೫ ಲಕ್ಷಕ್ಕೂ ಹೆಚ್ಚು ಆಸ್ತಿ ಹಕ್ಕು ಪತ್ರಗಳನ್ನು ನಾಳೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ವಿತರಿಸಲಿದ್ದಾರೆ.

ಸುಧಾರಿತ ತಂತ್ರಜ್ಞಾನದೊಂದಿಗೆ ಗ್ರಾಮೀಣ ಪ್ರದೇಶಗಳ ಭೂ ಸಮೀಕ್ಷೆ ಮತ್ತು ಮ್ಯಾಪಿಂಗ್ ಮಾಡುವ ಸ್ವಾಮಿತ್ವ ಯೋಜನೆ, ಗ್ರಾಮೀಣ ಭಾಗದಲ್ಲಿರುವ ಕುಟುಂಬಗಳಿಗೆ ‘ತಮ್ಮ ಆಸ್ತಿ ಹಕ್ಕಿನ ಪತ್ರ ನೀಡುವ ಕಾರ್ಯಕ್ರಮವಾಗಿದೆ. ಗ್ರಾಮೀಣ ಜನರ ಮನೆಯ ಮಾಲೀಕರಿಗೂ ತಮ್ಮ ಆಸ್ತಿ ಹಕ್ಕುಗಳ ದಾಖಲೆ ಹಾಗೂ ಪತ್ರಗಳನ್ನು ವಿತರಿಸುವ ಮೂಲಕ ಗ್ರಾಮೀಣ ಭಾರತದ ಆರ್ಥಿಕ ಅಭಿವೃದ್ಧಿಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಇದು ಆಸ್ತಿಗಳನ್ನು ಬಳಸಿ ಹಣಗಳಿಕೆಯನ್ನು ಸುಗಮಗೊಳಿಸುತ್ತದೆ, ಬ್ಯಾಂಕ್ ಸಾಲಗಳ ಮೂಲಕ ಸಾಂಸ್ಥಿಕ ಸಾಲ ಪಡೆಯಲು ಅನುವುಮಾಡಿಕೊಡುತ್ತದೆ. ಆಸ್ತಿ-ಸಂಬಂಧಿತ ವಿವಾದಗಳನ್ನು ಕಡಿಮೆ

ಮಾಡುತ್ತದೆ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಆಸ್ತಿ ಮೌಲ್ಯಮಾಪನಗಳು ಮತ್ತು ಆಸ್ತಿ ತೆರಿಗೆ ಸಂಗ್ರಹವನ್ನು ಬೆಂಬಲಿಸುತ್ತದೆ.

ಈವರೆಗೆ, ೩ ಲಕ್ಷ ೧೭ ಸಾವಿರಕ್ಕೂ ಹೆಚ್ಚು ಗ್ರಾಮಗಳಲ್ಲಿ ಡ್ರೋನ್ ಸಮೀಕ್ಷೆಗಳು ಪೂರ್ಣಗೊಂಡಿವೆ, ಗುರಿಯ ಶೇಕಡಾ ೯೨ ರಷ್ಟು ಪ್ರದೇಶಗಳನ್ನು ಒಳಗೊಂಡಿದೆ. ೧ ಲಕ್ಷ ೫೩ ಸಾವಿರಕ್ಕೂ ಹೆಚ್ಚು ಗ್ರಾಮಗಳ ಸುಮಾರು ೨ ಕೋಟಿ ೨೫ ಲಕ್ಷ ಆಸ್ತಿ ಕಾರ್ಡ್‌ಗಳನ್ನು ಸಿದ್ಧಪಡಿಸಲಾಗಿದೆ. ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ತ್ರಿಪುರ, ಗೋವಾ, ಉತ್ತರಾಖಂಡ ಮತ್ತು ಹರಿಯಾಣದಲ್ಲಿ ಈ ಯೋಜನೆ ಪೂರ್ಣ ಪ್ರಮಾಣದಲ್ಲಿ ತಲುಪಿದೆ. ಮಧ್ಯಪ್ರದೇಶ, ಉತ್ತರ ಪ್ರದೇಶ, ಛತ್ತೀಸ್‌ಗಢ ಮತ್ತು ಹಲವಾರು ಕೇಂದ್ರಾಡಳಿತ ಪ್ರದೇಶಗಳಲ್ಲಿಯೂ ಡ್ರೋನ್ ಸಮೀಕ್ಷೆಗಳು ಪೂರ್ಣಗೊಂಡಿವೆ.

*****************

ಭಾರತದ ಎಲೆಕ್ಟ್ರಾನಿಕ್ಸ್ ಸರಕುಗಳ ರಫ್ತು ಡಿಸೆಂಬರ್ ೨೦೨೪ ರಲ್ಲಿ ಶೇ. ೩೫.೧೧ ರಷ್ಟು ಹೆಚ್ಚಳಗೊಂಡು ಎರಡು ವರ್ಷಗಳ ಗರಿಷ್ಠ ೩.೫೮ ಶತಕೋಟಿ ಡಾಲರ್‌ಗಳಿಗೆ ತಲುಪಿದೆ, ಕಳೆದ ವರ್ಷದ ಇದೇ ತಿಂಗಳಲ್ಲಿ ೨.೬೫ ಶತಕೋಟಿ ಡಾಲರ್‌ಗಳಷ್ಟಿತ್ತು. ಭಾರತೀಯ ಸರಕುಗಳಿಗೆ ಹೆಚ್ಚಿದ ವಿದೇಶಿ ಬೇಡಿಕೆ ಹಾಗೂ ದೇಶೀಯ ಉತ್ಪಾದನಾ ಸಾಮರ್ಥ್ಯದಲ್ಲಿನ ಹೆಚ್ಚಳವನ್ನು ಇದು ಪ್ರತಿಬಿಂಬಿಸುತ್ತದೆ ಎಂದು ವಾಣಿಜ್ಯ ಸಚಿವಾಲಯ ಹೇಳಿದೆ.

ಪ್ರಸಕ್ತ ಹಣಕಾಸು ವರ್ಷದ ಏಪ್ರಿಲ್-ಡಿಸೆಂಬರ್ ಅವಧಿಯಲ್ಲಿ ದೇಶದ ಎಲೆಕ್ಟ್ರಾನಿಕ್ ರಫ್ತುಗಳು ಶೇಕಡ ೨೮.೬ ರಷ್ಟು ಏರಿಕೆಯಾಗಿ ೨೬.೧೧ ಶತಕೋಟಿ ಡಾಲರ್‌ಗಳಿಗೆ ತಲುಪಿದೆ, ೨೦೨೩-೨೪ ರಲ್ಲಿ ಇದೇ ಅವಧಿಯಲ್ಲಿ ೨೦.೩ ಶತಕೋಟಿ ಡಾಲರ್‌ಗಳಷ್ಟಿತ್ತು.

ಕೇಂದ್ರದ ಉತ್ಪಾದನಾ ಸಂಬಂಧಿತ ಪ್ರೋತ್ಸಾಹಕ ಯೋಜನೆಯ ಯಶಸ್ಸಿನಿಂದ ದೇಶದಲ್ಲಿ ಹೊಸ ಉತ್ಪಾದನಾ ಸಾಮರ್ಥ್ಯಗಳು ಹೊರಹೊಮ್ಮಿರುವುದರಿಂದ ಎಲೆಕ್ಟ್ರಾನಿಕ್ಸ್ ಸರಕುಗಳು ರಫ್ತು ವೇಗವಾಗಿ ಬೆಳೆಯುತ್ತಿರುವ ವಿಭಾಗವಾಗಿ ಹೊರಹೊಮ್ಮಿವೆ.

ಆಪಲ್ ಮತ್ತು ಸ್ಯಾಮ್‌ಸಂಗ್‌ನಂತಹ ಪ್ರಮುಖ ಉದ್ಯಮಗಳು ದೇಶದಲ್ಲಿ ಉತ್ಪಾದನೆ ವಿಸ್ತರಿಸುತ್ತಿರುವುದರಿಂದ ಎಲೆಕ್ಟ್ರಾನಿಕ್ಸ್ ವಲಯದೊಳಗೆ ಸ್ಮಾರ್ಟ್‌ಫೋನ್ ರಫ್ತು ಶೇ. ೪೫

ರಷ್ಟು ಹೆಚ್ಚಳವನ್ನು ದಾಖಲಿಸಿವೆ. ಪಿಎಲ್ಐ ಯೋಜನೆ ಮತ್ತು ಸರ್ಕಾರದ ತ್ವರಿತ ಅನುಮೋದನೆಗಳು ರಫ್ತು ಹೆಚ್ಚಲು ಕಾರಣವಾಗಿವೆ.

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಮೂಲಕ ಈ ತಿಂಗಳ ೧೯ರ ಭಾನುವಾರದಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಸಾರ್ವಜನಿಕರು ತಮ್ಮ ಸಲಹೆ, ಸೂಚನೆಗಳನ್ನು ಉಚಿತ ದೂರವಾಣಿ ೧೮೦೦-೧೧-೭೮೦೦ ಗೆ ಕರೆ ಮಾಡಿ ತಿಳಿಸಬಹುದಾಗಿದೆ. ಇದಲ್ಲದೇ ಸಾರ್ವಜನಿಕರು ನರೇಂದ್ರ ಮೋದಿ ಆಪ್ ಅಥವಾ ಮೈ ಗೌವ್ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

ಸಾರ್ವಜನಿಕರು ತಮ್ಮ ಸಲಹೆ, ಸೂಚನೆ, ಅಭಿಪ್ರಾಯಗಳನ್ನು ತಿಳಿಸಲು ಇಂದು ಕೊನೆಯ ದಿನವಾಗಿದೆ. ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ.

ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

*****************

ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ ಇಂದಿನಿಂದ ೩ ದಿನಗಳ ಕಾಲ ಲಕ್ಷದ್ವೀಪ ಪ್ರವಾಸ ಕೈಗೊಳ್ಳಲಿದ್ದಾರೆ. ಉಪರಾಷ್ಟ್ರಪತಿ ಧನ್‌ಕರ್ ಇದೇ ಮೊದಲ ಬಾರಿಗೆ ಲಕ್ಷದ್ವೀಪಕ್ಕೆ ಭೇಟಿ ನೀಡುತ್ತಿದ್ದಾರೆ.

ಮೂರು ದಿನಗಳ ಪ್ರವಾಸದಲ್ಲಿ ಅವರು ಹಲವು ಸರ್ಕಾರಿ ಯೋಜನೆಗಳಿಗೆ ಚಾಲನೆ ಸೇರಿದಂತೆ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಇದರೊಂದಿಗೆ ಸ್ವ ಸಹಾಯ ಗುಂಪಿನ ಸದಸ್ಯರು ಮತ್ತು ಫಲಾನುಭವಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

*****************

ತೆಲಂಗಾಣದ ಭಾರತ ರಾಷ್ಟ್ರ ಸಮಿತಿ-ಬಿಆರ್‌ಎಸ್ ಪಕ್ಷದ ಕಾರ್ಯಾಧ್ಯಕ್ಷ ಕೆ.ತಾರಕ ರಾಮಾರಾವ್ ಅವರನ್ನು ಫಾರ್ಮುಲಾ ಇ-ರೇಸ್ ಪ್ರಕರಣದಲ್ಲಿ ನಡೆದಿದೆ ಎನ್ನಲಾದ ಹಣಕಾಸು ಅಕ್ರಮಗಳಲ್ಲಿ ಅವರ ಪಾತ್ರದ ಬಗ್ಗೆ ಜಾರಿ ನಿದೇಶನಾಲಯದ ಅಧಿಕಾರಿಗಳು ನಿನ್ನೆ ೭ ಗಂಟೆಗಳಿಗೂ ಹೆಚ್ಚು ಕಾಲ ವಿಚಾರಣೆ ನಡೆಸಿದರು.

ವಿಚಾರಣೆ ಮುಗಿಸಿ ಇಡಿ ಕಚೇರಿಯಿಂದ ಹೊರ ಬಂದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ತಾರಕ ರಾಮಾರಾವ್, ಫಾರ್ಮುಲಾ ಇ-ರೇಸ್‌ನ ೧೦ನೇ ಆವೃತ್ತಿಯ ಹೊಸ ಒಪ್ಪಂದ ಹಾಗೂ ಬ್ರಿಟನ್ ಮೂಲದ ಫಾರ್ಮುಲಾ ಇ-ರೇಸ್ ಕಾರ್ಯಾಚರಣೆಗಳಿಗೆ ಹಣ ವರ್ಗಾವಣೆ ಎಲ್ಲಾ ಮಾಹಿತಿಯನ್ನು ಒದಗಿಸಿರುವುದಾಗಿ ಮಾಹಿತಿ ನೀಡಿದರು.

ಈ ಪ್ರಕರಣದಲ್ಲಿ ತಾವು ಯಾವುದೇ ತಪ್ಪು ಮಾಡಿಲ್ಲ ಎಂದು ಪುನರುಚ್ಚರಿಸಿದ ಅವರು, ಸುಳ್ಳು ಪತ್ತೆ ಪರೀಕ್ಷೆಗೆ ಒಳಗಾಗಲು ತಾವು ಸಿದ್ಧ. ಇದೇ ರೀತಿಯ ಪರೀಕ್ಷೆಗೆ ಒಳಗಾಗುವಂತೆ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರಿಗೆ ಸವಾಲು ಹಾಕಿದರು.

ಫಾರ್ಮುಲಾ ಇ-ರೇಸ್ ಕಾರ್ಯಕ್ರಮ ರಾಷ್ಟ್ರೀಯ ಮಹತ್ವದ್ದಾಗಿದ್ದು, ಕಾರ್ಯಕ್ರಮದಲ್ಲಿ ಹಲವು ಕೇಂದ್ರ ಸಚಿವರು ಸಹ ಭಾಗವಹಿಸಿದ್ದರು ಎಂಬುದನ್ನು ವಿಚಾರಣೆಯ ವೇಳೆ ಜಾರಿ ನಿರ್ದೇಶನಾಲಯಕ್ಕೆ ತಿಳಿಸಿರುವುದಾಗಿ ಹೇಳಿದರು.

ಕ್ರೀಡೆಯ ಸಂಪೂರ್ಣ ಪ್ರಕ್ರಿಯೆಯಲ್ಲಿ ಯಾವುದೇ ಹಣಕಾಸಿನ ಅಕ್ರಮಗಳು, ದುರುಪಯೋಗ ಅಥವಾ ಭ್ರಷ್ಟಾಚಾರ ನಡೆದಿಲ್ಲ. ಸರ್ಕಾರದಿಂದ ಫಾರ್ಮುಲಾ ಇ-ರೇಸ್ ಆಯೋಜಕರಿಗೆ ವರ್ಗಾಯಿಸಲಾದ ಎಲ್ಲ ಹಣವನ್ನು ಲೆಕ್ಕ ಹಾಕಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*****************

ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಎಲ್ಲಾ ಒಟ್ಟು ೭೦ ಕ್ಷೇತ್ರಗಳ ಪೈಕಿ ಭಾರತೀಯ ಜನತಾ ಪಕ್ಷ ೬೭ ಕ್ಷೇತ್ರಗಳಲ್ಲಿ ಸ್ಪರ್ಧಿಸಲಿದೆ. ಉಳಿದ ೩ ಕ್ಷೇತ್ರಗಳಲ್ಲಿ ತಲಾ ಒಂದೊಂದು ಸ್ಥಾನವನ್ನು ಎನ್‌ಡಿಎ ಮಿತ್ರಪಕ್ಷವಾದ ಜೆಡಿಯು ಮತ್ತು ಲೋಕಜನಶಕ್ತಿ ಪಕ್ಷಕ್ಕೆ ಬಿಟ್ಟುಕೊಡಲಾಗಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ತಿಳಿಸಿದ್ದಾರೆ.

ಬುರಾರಿ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಯು ಮತ್ತು ದಿಯೋಲಿಯಿಂದ ಲೋಕಜನಶಕ್ತಿ ಪಕ್ಷ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಲಿದೆ.

*****************

ನವದೆಹಲಿಯಲ್ಲಿ ನಡೆಯಲಿರುವ ೭೬ನೇ ಗಣರಾಜ್ಯೋತ್ಸವ ಪ್ರಧಾನ ಸಮಾರಂಭದಲ್ಲಿ ಇಂಡೋನೇಷ್ಯಾದ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ, ಇಂಡೋನೇಷ್ಯಾದ ಅಧ್ಯಕ್ಷರು ಜನವರಿ ೨೫ ಮತ್ತು ೨೬ ರಂದು ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ವಿದೇಶಾಂಗ ಸಚಿವಾಲಯದ ಪ್ರಕಾರ, ೨೦೨೪ ರ ಅಕ್ಟೋಬರ್‌ನಲ್ಲಿ ಇಂಡೋನೇಷ್ಯಾದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಪ್ರಬೋವೊ ಸುಬಿಯಾಂಟೊ ಅವರ ಮೊದಲ ಭಾರತ ಭೇಟಿ ಇದಾಗಿದೆ.

ಭಾರತ ಮತ್ತು ಇಂಡೋನೇಷ್ಯಾ ಆತ್ಮೀಯ ಮತ್ತು ಸ್ನೇಹಪರ ಸಂಬಂಧಗಳನ್ನು ಹೊಂದಿವೆ. ಇಂಡೋನೇಷ್ಯಾ, ಸಮಗ್ರ ಕಾರ್ಯತಂತ್ರದ ಪಾಲುದಾರ ದೇಶವಾಗಿ, ಭಾರತದ 'ಆಕ್ಟ್ ಈಸ್ಟ್' ನೀತಿ ಮತ್ತು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಪ್ರಮುಖ ಆಧಾರ ಸ್ತಂಭವಾಗಿದೆ. ಭಾರತೀಯ ವಾಯುಪಡೆಯು ಗಣರಾಜ್ಯೋತ್ಸವದ ಪರೇಡ್‌ನಲ್ಲಿ ಮೈನವಿರೇಳಿಸುವ ವೈಮಾನಿಕ ಪ್ರದರ್ಶನವನ್ನು ಪ್ರದರ್ಶಿಸಲು ಸಿದ್ಧವಾಗಿದೆ. ಒಟ್ಟು ೪೦ ಸಮರ ವಿಮಾನಗಳು ಪ್ರದರ್ಶನದಲ್ಲಿ ಭಾಗವಹಿಸಲಿವೆ.

ಮಿಗ್-೨೯, ರಫೇಲ್, ಸುಖೋಯ್-೩೦, ಜಾಗ್ವಾರ್, ಅಪಾಚೆ ಸೇರಿದಂತೆ ಪ್ರಮುಖ ಯುದ್ಧ ವಿಮಾನಗಳು ಪ್ರಮುಖ ಆಕರ್ಷಣೆಯಾಗಲಿವೆ.

ಸ್ಕ್ವಾಡ್ರನ್ ಲೀಡರ್ ಮಹೇಂದ್ರ ಸಿಂಗ್ ನೇತೃತ್ವದ ಒಟ್ಟು ೧೪೪ ವಾಯುಪಡೆಯ ಸಿಬ್ಬಂದಿ ಪಥಸಂಚಲನದಲ್ಲಿ ಭಾಗವಹಿಸಲಿದ್ದಾರೆ.

*****************

ಭಾರತದ ಭೇಟಿಯಲ್ಲಿರುವ ಸಿಂಗಪುರ ಅಧ್ಯಕ್ಷ ಥರ್ಮನ್ ಷಣ್ಮುಗ ರತ್ನಂ ಅವರು ನಿನ್ನೆ ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ಭಾರತ-ಸಿಂಗಪುರ ಸಮಗ್ರ ಕಾರ್ಯತಂತ್ರ ಪಾಲುದಾರಿಕೆಯ ಬಗ್ಗೆ ಚರ್ಚೆ ನಡೆಸಿದವು ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಸೆಮಿಕ್ಸರ್‌ಗಳು, ಡಿಜಿಟಲೀಕರಣ, ಕೌಶಲ್ಯ, ಸಂಪರ್ಕ ಮತ್ತು ಭವಿಷ್ಯದ ಕ್ಷೇತ್ರಗಳ ಬಗ್ಗೆ ನಾವು ಮಾತುಕತೆ ನಡೆಸಿದೆವು, ಕೈಗಾರಿಕೆ, ಮೂಲಸೌಕರ್ಯ ಮತ್ತು ಸಂಸ್ಕೃತಿಯಲ್ಲಿ ಸಹಕಾರವನ್ನು ಸುಧಾರಿಸುವ ಮಾರ್ಗೋಪಾಯಗಳ ಕುರಿತು ಚರ್ಚೆ ನಡಿಸಿದ್ದಾಗಿ ಮಾಹಿತಿ ನೀಡಿದ್ದಾರೆ.

*****************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ತನ್ನ ಸ್ಪೇಡೆಕ್ಸ್ ಮಿಷನ್ ಅಡಿಯಲ್ಲಿ ೨ ಉಪಗ್ರಹಗಳ ಜೋಡಣಾ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

ಇಸ್ರೋದ ಈ ಸಾಧನೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಶ್ಲಾಘಿಸಿದ್ದಾರೆ.

*****************

ನವದೆಹಲಿಯಲ್ಲಿ ನಡೆಯುತ್ತಿರುವ ಇಂಡಿಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿಂದು ಭಾರತದ ಶಟ್ಲರ್ ಪಿ.ವಿ ಸಿಂಧು ಮಹಿಳೆಯರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಇಂಡೋನೇಷ್ಯಾದ ಗ್ರೆಗೋರಿಯಾ ಮಾರಿಸ್ಕ ತುನ್ ಜುಂಗ್ ಅವರನ್ನು ಎದುರಿಸಲಿದ್ದಾರೆ.

ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಕಿರಣ್ ಜಾರ್ಜ್ ಚೀನಾದ ವೆಂಗ್ ಹೋಂ ಗ್ಯಾಂಗ್ ಅವರ ವಿರುದ್ಧ ಸೆಣಸಾಡಲಿದ್ದಾರೆ.

ಕೆ.ಡಿ ಜಾಧವ್ ಒಳಾಂಗಣ ಕ್ರೀಡಾಂಗಣದಲ್ಲಿ ಇಂದು ಸಂಜೆ ಪಂದ್ಯ ನಡೆಯಲಿದೆ.  ಪುರುಷರ ಡಬಲ್ಸ್ ವಿಭಾಗದಲ್ಲಿ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಜೋಡಿ, ದಕ್ಷಿಣ ಕೊರಿಯಾದ ಜಿನ್ ಯಾಂಗ್ ಮತ್ತು ಕಾಂಗ್ ಮಿನ್ ಹ್ಯೂಂಕ್  ಅವರಿಗೆ ಪೈಪೋಟಿ ನೀಡಲಿದೆ.

*********ಮುಕ್ತಾಯ*********